# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103


ದಿನಾಂಕ:20.05.2026

ಸಂಖ್ಯೆ:ತುವಿ:ಅವಿ:ಸುತ್ತೋಲೆ:2026-27/ ೫೫೬

## : ಸುತ್ತೋಲೆ :

ವಿಷಯ: ದಿನಾಂಕ:21.05.2026 ರ ಗುರುವಾರದಂದು 'ಭಯೋತ್ಪಾದನಾ ವಿರೋಧಿ ದಿನ' ಅಂಗವಾಗಿ ಪ್ರಮಾಣ ವಚನ ಸ್ವೀಕರಿಸುವ ಕುರಿತು.

ಉಲ್ಲೇಖ: 1. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ರಾಜಕೀಯ) ಇವರ ಪತ್ರ ಸಂಖ್ಯೆ:ಸಿಆಸುಇ 04 ಪಿಹೆಚ್ಎಲ್ 2026 ದಿನಾಂಕ:19.05.2026

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:20.05.2026 (ಕಂಡಿಕೆ-86)

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪ್ರತಿ ವರ್ಷ ಮೇ 21 ನೇ ದಿನಾಂಕದಂದು "ಭಯೋತ್ಪಾದನಾ ವಿರೋಧಿ ದಿನ" ವನ್ನಾಗಿ ಆಚರಿಸಲಾಗುತ್ತಿದೆ. ಅದರಂತೆ ಈ ವರ್ಷವೂ ಭಯೋತ್ಪಾದನಾ ವಿರೋಧಿ ದಿನವನ್ನು ಆಚರಿಸಲು ಕ್ರಮ ಕೈಗೊಳ್ಳುವಂತೆ ಉಲ್ಲೇಖ (01) ರ ಸರ್ಕಾರದ ಪತ್ರದಲ್ಲಿ ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಆಡಳಿತ ವಿಭಾಗಗಳ ಅಧಿಕಾರಿಗಳು, ಎಲ್ಲಾ ನಿಕಾಯಗಳ ಡೀನರು, ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರು ಮತ್ತು ಘಟಕ ಕಾಲೇಜುಗಳ ಪ್ರಾಂಶುಪಾಲರು, ಎಲ್ಲಾ ಬೋಧಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ದಿನಾಂಕ:21.05.2026 ರ ಗುರುವಾರದಂದು ಬೆಳಿಗ್ಗೆ 09.50 ಗಂಟೆಗೆ ವಿಶ್ವವಿದ್ಯಾನಿಲಯದ ಡಾ. ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮೀಜಿ ಸಭಾಂಗಣದಲ್ಲಿ ಹಾಜರಿದ್ದು, "ಭಯೋತ್ಪಾದನಾ ವಿರೋಧಿ ದಿನ" ದ ಪ್ರಮಾಣ ವಚನವನ್ನು ಸ್ವೀಕರಿಸುವಂತೆ ಸೂಚಿಸಿದೆ.

ಜ್ಞಾನಸಿರಿ ಕ್ಯಾಂಪಸ್, ತಿಪಟೂರು ಹಾಗೂ ಶಿರಾ ಸ್ನಾತಕೋತ್ತರ ಕೇಂದ್ರದ ಸಂಯೋಜಕರುಗಳು ತಮ್ಮ ಕ್ಯಾಂಪಸ್/ಕೇಂದ್ರದಲ್ಲಿಯೇ ಎಲ್ಲಾ ಬೋಧಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಪ್ರಮಾಣ ವಚನವನ್ನು ಸ್ವೀಕರಿಸಲು ಅಗತ್ಯ ಕ್ರಮವಹಿಸುವುದು.

ಸೂಚಿತ ಮಾಹಿತಿಯನ್ನು ಸಂಬಂಧಪಟ್ಟ ವಿಭಾಗಗಳ ಅಧಿಕಾರಿಗಳು/ಮುಖ್ಯಸ್ಥರು/ಪ್ರಾಂಶುಪಾಲರು ತಮ್ಮ ಅಧೀನದಲ್ಲಿನ ಎಲ್ಲಾ ಬೋಧಕ/ಬೋಧಕೇತರ ಹಾಗೂ ವಿದ್ಯಾರ್ಥಿಗಳ ಗಮನಕ್ಕೆ ತರುವುದು.

ಆದೇಶದ ಮೇರೆಗೆ

ಉಪಕುಲಸಚಿವರು
ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಅಡಕ: "ಭಯೋತ್ಪಾದನಾ ವಿರೋಧಿ ದಿನ" ಪ್ರಮಾಣ ವಚನ ಪ್ರತಿ.

ಗೆ,

1. ಮಾನ್ಯ ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಾರ್ಯಪಾಲಕ ಅಭಿಯಂತರರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಡೀನರು, ಕಲಾ, ವಿಜ್ಞಾನ, ಶಿಕ್ಷಣ ಮತ್ತು ವಾಣಿಜ್ಯ ನಿಕಾಯಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಮು.ತಿ.ನೋ

7. ಉಪಕುಲಸಚಿವರು, ಸಾಮಾನ್ಯ ಮತ್ತು ಅಭಿವೃದ್ಧಿ ವಿಭಾಗ/ಸಿಬ್ಬಂದಿ ವಿಭಾಗ/ಶೈಕ್ಷಣಿಕ ವಿಭಾಗ/ಸಿಂಡಿಕೇಟ್ ವಿಭಾಗ/ಕಾನೂನು ಕೋಶ/ಪರೀಕ್ಷಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ನಿರ್ದೇಶಕರು, IQAC, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
10. ನೋಡಲ್ ಅಧಿಕಾರಿಗಳು, RUSA, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
11. ನಿರ್ದೇಶಕರು, PMEB, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
12. ನಿರ್ದೇಶಕರು, ಪ್ರಸಾರಾಂಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
13. ನಿರ್ದೇಶಕರು, ಸಂಶೋಧನೆ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
14. ಎಸ್ಟೇಟ್ ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
15. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
16. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
17. ಗ್ರಂಥಪಾಲಕರು, ವಿವಿ ಗ್ರಂಥಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
18. ನಿರ್ದೇಶಕರು, ದೈಹಿಕ ಶಿಕ್ಷಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
19. ಸಂಯೋಜಕರು, ರಾಷ್ಟ್ರೀಯ ಹಬ್ಬಗಳ ಆಚರಣೆ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು :- **ಪ್ರಮಾಣ ವಚನ ಸ್ವೀಕರಿಸಲು ಅಗತ್ಯ ಕ್ರಮವಹಿಸುವುದು.**
20. ನಿರ್ದೇಶಕರು/ಸಂಯೋಜಕರು, ವಿಶ್ವವಿದ್ಯಾನಿಲಯದ ವಿವಿಧ ಕೇಂದ್ರಗಳು/ಪೀಠಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
21. ಸಂಯೋಜಕರು, ಸಾಂಸ್ಕೃತಿಕ ಚಟುವಟಿಕೆಗಳ ಘಟಕ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
22. ಸಂಚಾಲಕರು, ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
23. ಕಾರ್ಯಕ್ರಮ ಸಂಯೋಜನಾಧಿಕಾರಿಗಳು, ರಾಷ್ಟ್ರೀಯ ಸೇವಾ ಯೋಜನಾ ಕೋಶ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
24. ಎಲ್ಲಾ ನಿಲಯಪಾಲಕರು, ವಿಶ್ವವಿದ್ಯಾನಿಲಯ ವಿದ್ಯಾರ್ಥಿನಿಲಯಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
25. ಮುಖ್ಯಸ್ಥರು, ವಿಶ್ವವಿದ್ಯಾನಿಲಯ ಹಾಗೂ ಘಟಕ ಕಾಲೇಜುಗಳ ಎನ್.ಸಿ.ಸಿ./ಎನ್.ಎಸ್.ಎಸ್./ಸ್ಕೌಟ್ಸ್ & ಗೈಡ್ಸ್/ ರೋವರ್ಸ್ ಮತ್ತು ರೇಂಜರ್ಸ್/ಯುವ ರೆಡ್‌ಕ್ರಾಸ್ ಘಟಕ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
26. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು :- (**ವಿವಿ ಜಾಲತಾಣದಲ್ಲಿ ಭಿತ್ತರಿಸುವಂತೆ ಹಾಗೂ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಸಂದೇಶವನ್ನು ಕಳುಹಿಸುವಂತೆ ಸೂಚಿಸಿದೆ.**)
27. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
28. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
29. ಕಚೇರಿ ಪ್ರತಿ

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 04 ಪಿಹೆಚ್‌ಎಲ್ 2026

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಡಾ. ಬಿ.ಆರ್. ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:19.05.2026.

ಇವರಿಂದ:
ಸರ್ಕಾರದ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
ವಿಧಾನ ಸೌಧ,

ಇವರಿಗೆ:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು.
2. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು / ಕರ್ನಾಟಕ ವಿಧಾನಸಭೆ, ವಿಧಾನಸೌಧ, ಬೆಂಗಳೂರು.
3. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು.
4. ನಿವಾಸಿ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
5. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
6. ಎಲ್ಲಾ ವಿಶ್ವ ವಿದ್ಯಾನಿಲಯಗಳ ಕುಲಸಚಿವರುಗಳು.
7. ಎಲ್ಲಾ ಪ್ರಾದೇಶಿಕ ಆಯುಕ್ತರು / ಎಲ್ಲಾ ಜಿಲ್ಲಾಧಿಕಾರಿಗಳು / ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
8. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
9. ಶಾಖಾ ರಕ್ಷಾ ಕಡತ.

ಮಾನ್ಯರೆ,

ವಿಷಯ: ದಿನಾಂಕ:21.05.2026 ರ ಗುರುವಾರದಂದು "ಭಯೋತ್ಪಾದನಾ ವಿರೋಧಿ ದಿನ" ವನ್ನು ಆಚರಿಸುವ ಬಗ್ಗೆ.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪ್ರತಿ ವರ್ಷ ಮೇ 21ನೇ ದಿನಾಂಕದಂದು ಭಯೋತ್ಪಾದನಾ ವಿರೋಧಿ ದಿನವನ್ನಾಗಿ ಆಚರಿಸಲಾಗುತ್ತಿದೆ. ಅದರಂತೆ ಈ ವರ್ಷವೂ ಭಯೋತ್ಪಾದನಾ ವಿರೋಧಿ ದಿನವನ್ನು ಆಚರಿಸಲು ಉದ್ದೇಶಿಸಲಾಗಿದೆ.

ತಮ್ಮ ಕಛೇರಿಗಳಲ್ಲಿ ಹಾಗೂ ತಮ್ಮ ಅಧೀನದಲ್ಲಿ ಬರುವ ಕ್ಷೇತ್ರ ಇಲಾಖೆ / ಸಂಸ್ಥೆಗಳು / ಆಯೋಗಗಳು ಇತ್ಯಾದಿ ಕಛೇರಿಗಳಲ್ಲಿ ಪ್ರತಿಜ್ಞಾ ವಚನವನ್ನು ಸ್ವೀಕರಿಸುವ ಮೂಲಕ "ದಿನಾಂಕ:21.05.2026 ರ ಗುರುವಾರದಂದು ಭಯೋತ್ಪಾದನಾ ವಿರೋಧಿ ದಿನ" ವನ್ನು ಆಚರಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ (ಪ್ರತಿಜ್ಞಾ ವಚನದ ಪ್ರತಿ ಲಗತ್ತಿಸಿದೆ).

ತಮ್ಮ ನಂಬುಗೆಯ

ಸಂದೀಪ್ ಬಿ.ಕೆ.
(ಸಂದೀಪ್ ಬಿ.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ರಾಜಕೀಯ)

ಪ್ರತಿ :

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಸಿಆಸುಇ, ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

# ಭಯೋತ್ಪಾದನಾ ವಿರೋಧಿ ದಿನದ

# ಪ್ರಮಾಣ ವಚನ

ಅಹಿಂಸೆ ಹಾಗೂ ಸಹನೆಗೆ ಹೆಸರಾದ ನಮ್ಮ ರಾಷ್ಟ್ರದ ಭವ್ಯ ಪರಂಪರೆಯಲ್ಲಿ ದೃಢ ವಿಶ್ವಾಸವುಳ್ಳ ಭಾರತದ ಪ್ರಜೆಗಳಾದ ನಾವು ಎಲ್ಲಾ ಬಗೆಯ ಭಯೋತ್ಪಾದನೆ ಮತ್ತು ಹಿಂಸೆಯನ್ನು ನಮ್ಮೆಲ್ಲ ಶಕ್ತಿ ಸಾಮರ್ಥ್ಯದಿಂದ ಎದುರಿಸುತ್ತೇವೆ ಎಂದು ಈ ಮೂಲಕ ಶ್ರದ್ಧಾಪೂರ್ವಕವಾಗಿ ಪ್ರತಿಜ್ಞೆ ಮಾಡುತ್ತೇವೆ. ನಮ್ಮ ಸಹಬಾಂಧವರಲ್ಲಿ ಶಾಂತಿ, ಸಾಮಾಜಿಕ ಸೌಹಾರ್ದತೆ ಮತ್ತು ಪರಸ್ಪರ ಅರಿವನ್ನು ಸಾಧಿಸಲು ಹಾಗೂ ಉತ್ತೇಜಿಸಲು ಮತ್ತು ಮಾನವ ಜೀವಕ್ಕೆ ಹಾಗೂ ಮೌಲ್ಯಗಳಿಗೆ ಬೆದರಿಕೆ ಒಡ್ಡುತ್ತಿರುವ ವಿಚ್ಛಿದ್ರಕಾರಿ ಶಕ್ತಿಗಳ ವಿರುದ್ಧ ಹೋರಾಡಲು ನಾವು ಪಣ ತೊಡುತ್ತೇವೆ.

*****